E-4473461/22

## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** 2022-23ನೇ ಸಾಲಿನ ಆಯವ್ಯಯ ಘೋಷಣೆ ಕಂಡಿಕೆ-269 ರನ್ವಯ "ನೇಕಾರರಿಗೆ ನೇಕಾರಿಕೆ ಉದ್ದೇಶಕ್ಕಾಗಿ ಎದುರಿಸುತ್ತಿರುವ ಬಂಡವಾಳ ಕೊರತೆಯನ್ನು ನೀಗಿಸಲು ರಾಜ್ಯದ ಸಹಕಾರಿ ಮತ್ತು ವಾಣಿಜ್ಯ ಬ್ಯಾಂಕ್ ಗಳ ಮೂಲಕ ಪಡೆಯುವ ಸಾಲದ ಮೇಲೆ ಶೇ.8 ರಷ್ಟು ಬಡ್ಡಿ ಸಹಾಯಧನವನ್ನು ರಾಜ್ಯ ಸರ್ಕಾರ ನೀಡಲಾಗುವುದು" ಈ ಯೋಜನೆಯ ಮಾರ್ಗಸೂಚಿಗೆ ಸರ್ಕಾರದ ಅನುಮೋದನೆ ನೀಡುವ ಕುರಿತು.

**ಓದಲಾಗಿದೆ:**
1. 2022-23ನೇ ಸಾಲಿನ ಆಯವ್ಯಯ ಘೋಷಣೆ ಕಂಡಿಕೆ-269.
2. ಸರ್ಕಾರದ ಆದೇಶ ಸಂಖ್ಯೆ:CI 23 JAKY 2022, ದಿನಾಂಕ: 19-04-2022.
3. ಜವಳಿ ಅಭಿವೃದ್ಧಿ ಆಯುಕ್ತರು ಹಾಗೂ ನಿರ್ದೇಶಕರು, ಕೈಮಗ್ಗ ಮತ್ತು ಜವಳಿ ಇಲಾಖೆ, ಬೆಂಗಳೂರು, ಇವರ ಪತ್ರ ಸಂಖ್ಯೆ: ಕೈಜಇ/ ಕೈಮಗ್ಗ/ ಅಧೀ/8% ಬಡ್ಡಿ ಸಹಾಯಧನ/ ಮಾರ್ಗಸೂಚಿ/2022-23, ದಿನಾಂಕ:13-05-2022
4. ಜವಳಿ ಅಭಿವೃದ್ಧಿ ಆಯುಕ್ತರು ಹಾಗೂ ನಿರ್ದೇಶಕರು, ಕೈಮಗ್ಗ ಮತ್ತು ಜವಳಿ ಇಲಾಖೆ, ಬೆಂಗಳೂರು, ಇವರ ಪತ್ರ ಸಂಖ್ಯೆ: ಕೈಜಇ/ ಕೈಮಗ್ಗ/ ಅಧೀ/8% ಬಡ್ಡಿ ಸಹಾಯಧನ/ ಮಾರ್ಗಸೂಚಿ/ 2022-23, ದಿನಾಂಕ: 13-06-2022.

26/7/2022
DD(H/m)

* * *

**ಪ್ರಸ್ತಾವನೆ:-**

ಮೇಲೆ(1)ರಲ್ಲಿ ಓದಲಾದ 2022-23ನೇ ಸಾಲಿನ ಆಯವ್ಯಯ ಘೋಷಣೆ ಕಂಡಿಕೆ-269 ರಲ್ಲಿ "ನೇಕಾರರಿಗೆ ನೇಕಾರಿಕೆ ಉದ್ದೇಶಕ್ಕಾಗಿ ಎದುರಿಸುತ್ತಿರುವ ಬಂಡವಾಳ ಕೊರತೆಯನ್ನು ನೀಗಿಸಲು ರಾಜ್ಯದ ಸಹಕಾರಿ ಮತ್ತು ವಾಣಿಜ್ಯ ಬ್ಯಾಂಕ್ ಗಳ ಮೂಲಕ ಪಡೆಯುವ ಸಾಲದ ಮೇಲೆ ಶೇ.8 ರಷ್ಟು ಬಡ್ಡಿ ಸಹಾಯಧನವನ್ನು ರಾಜ್ಯ ಸರ್ಕಾರ ನೀಡಲಾಗುವುದು" ಎಂದು ಘೋಷಿಸಲಾಗಿರುತ್ತದೆ.

ಮೇಲೆ(2)ರಲ್ಲಿ ಓದಲಾದ ಸರ್ಕಾರದ ಆದೇಶದಲ್ಲಿ, "ನೇಕಾರರಿಗೆ ನೇಕಾರಿಕೆ ಉದ್ದೇಶಕ್ಕಾಗಿ ಎದುರಿಸುತ್ತಿರುವ ಬಂಡವಾಳ ಕೊರತೆಯನ್ನು ನೀಗಿಸಲು ರಾಜ್ಯದ ಸಹಕಾರಿ ಮತ್ತು ವಾಣಿಜ್ಯ ಬ್ಯಾಂಕ್ ಗಳ ಮೂಲಕ ಪಡೆಯುವ ಸಾಲದ ಮೇಲೆ ಶೇ.8 ರಷ್ಟು ಬಡ್ಡಿ ಸಹಾಯಧನ ನೀಡುವ ಯೋಜನೆಯಡಿ ತಾತ್ವಿಕ ಅನುಮೋದನೆ ನೀಡಿ, ಯೋಜನೆಯ ಅರ್ಹತೆಗಳು/ ಮಾರ್ಗಸೂಚಿಗಳು/ ಷರತ್ತು ಮತ್ತು ನಿಬಂಧನೆಗಳನ್ನು ಸಿದ್ಧಪಡಿಸಿ ಸರ್ಕಾರಕ್ಕೆ ಸಲ್ಲಿಸಲು ಸೂಚಿಸಲಾಗಿರುತ್ತದೆ.

ಮೇಲೆ(3)ರಲ್ಲಿ ಓದಲಾದ ಪತ್ರದಲ್ಲಿ ಜವಳಿ ಅಭಿವೃದ್ಧಿ ಆಯುಕ್ತರು ಹಾಗೂ ನಿರ್ದೇಶಕರು, ಕೈಮಗ್ಗ ಮತ್ತು ಜವಳಿ ಇಲಾಖೆ, ಇವರು ಕೈಮಗ್ಗ ಮತ್ತು ವಿದ್ಯುತ್ ಮಗ್ಗಗಳ ನೇಕಾರರಿಗೆ ನೇಕಾರಿಕೆ ಉದ್ದೇಶಕ್ಕಾಗಿ ಎದುರಿಸುತ್ತಿರುವ ಬಂಡವಾಳ ಕೊರತೆಯನ್ನು ನೀಗಿಸಲು ರಾಜ್ಯದ ಸಹಕಾರಿ ಮತ್ತು ವಾಣಿಜ್ಯ ಬ್ಯಾಂಕ್ ಗಳ ಮೂಲಕ ಪಡೆಯುವ ಸಾಲದ ಮೇಲೆ ಶೇ.8 ರ ಬಡ್ಡಿ ಸಹಾಯಧನ ಯೋಜನೆಯ ಕರಡು ಮಾರ್ಗಸೂಚಿಯನ್ನು ಸಿದ್ಧಪಡಿಸಿ ಅನುಮೋದನೆ ನೀಡುವಂತೆ ಕೋರಿ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಿರುತ್ತಾರೆ.

ಮೇಲೆ(4)ರಲ್ಲಿ ಓದಲಾದ ಪತ್ರದಲ್ಲಿ ಜವಳಿ ಅಭಿವೃದ್ಧಿ ಆಯುಕ್ತರು ಹಾಗೂ ನಿರ್ದೇಶಕರು, ಕೈಮಗ್ಗ ಮತ್ತು ಜವಳಿ ಇಲಾಖೆ, ಇವರು ಕೈಮಗ್ಗ ಮತ್ತು ವಿದ್ಯುತ್ ಮಗ್ಗಗಳ ನೇಕಾರರಿಗೆ ನೇಕಾರಿಕೆ ಉದ್ದೇಶಕ್ಕಾಗಿ ಎದುರಿಸುತ್ತಿರುವ ಬಂಡವಾಳ ಕೊರತೆಯನ್ನು ನೀಗಿಸಲು ರಾಜ್ಯದ ಸಹಕಾರಿ ಮತ್ತು ವಾಣಿಜ್ಯ ಬ್ಯಾಂಕ್ ಗಳ ಮೂಲಕ ಪಡೆಯುವ ಸಾಲದ ಮೇಲೆ ಶೇ.8 ರ ಬಡ್ಡಿ ಸಹಾಯಧನ ಯೋಜನೆಯ ಪರಿಷ್ಕೃತ ಕರಡು ಮಾರ್ಗಸೂಚಿಗೆ ಅನುಮೋದನೆ ನೀಡುವಂತೆ ಕೋರಿ ಮತ್ತೊಮ್ಮೆ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಿರುತ್ತಾರೆ.

ಜವಳಿ ಅಭಿವೃದ್ಧಿ ಆಯುಕ್ತರು ಹಾಗೂ ನಿರ್ದೇಶಕರು, ಕೈಮಗ್ಗ ಮತ್ತು ಜವಳಿ ಇಲಾಖೆ, ಇವರ ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿದ ಸರ್ಕಾರವು ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: CI 23 JAKY 2022, ಬೆಂಗಳೂರು, ದಿನಾಂಕ:21-07-2022**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, 2022-23ನೇ ಸಾಲಿನ ಆಯವ್ಯಯ ಘೋಷಣೆ ಕಂಡಿಕೆ-269 ರನ್ವಯ "ನೇಕಾರರಿಗೆ ನೇಕಾರಿಕೆ ಉದ್ದೇಶಕ್ಕಾಗಿ ಎದುರಿಸುತ್ತಿರುವ ಬಂಡವಾಳ ಕೊರತೆಯನ್ನು ನೀಗಿಸಲು ರಾಜ್ಯದ ಸಹಕಾರಿ ಮತ್ತು ವಾಣಿಜ್ಯ ಬ್ಯಾಂಕ್ ಗಳ ಮೂಲಕ ಪಡೆಯುವ ಸಾಲದ ಮೇಲೆ ಶೇ.8 ರಷ್ಟು ಬಡ್ಡಿ ಸಹಾಯಧನವನ್ನು ರಾಜ್ಯ ಸರ್ಕಾರ ನೀಡಲಾಗುವುದು" ಈ ಯೋಜನೆಯ ಮಾರ್ಗಸೂಚಿಗೆ ಈ ಕೆಳಕಂಡ ಷರತ್ತಿಗೊಳಪಟ್ಟು ಅನುಮೋದನೆ ನೀಡಿ ಆದೇಶಿಸಿದೆ:-

**ಅರ್ಹತೆಗಳು:-**

- ಕೈಮಗ್ಗ ಮತ್ತು ವಿದ್ಯುತ್ ಮಗ್ಗ ನೇಕಾರರು ಕರ್ನಾಟಕ ರಾಜ್ಯದ ನಿವಾಸಿಯಾಗಿರಬೇಕು.
- ರಾಜ್ಯದ ಕೈಮಗ್ಗ ಮತ್ತು ವಿದ್ಯುತ್ ಮಗ್ಗ ಹಾಗೂ ನೇಯ್ಗೆಯ ಇತರೆ ಚಟುವಟಿಕೆಗಳಲ್ಲಿ ತೊಡಗಿರುವ ನೇಕಾರರು ಇರತಕ್ಕದ್ದು.
- ಜಿಲ್ಲಾ ಮಟ್ಟದ ಹಂತದಲ್ಲಿ ಕೈಮಗ್ಗ ಮತ್ತು ಜವಳಿ ಇಲಾಖೆಯ ಉಪ / ಸಹಾಯಕ ನಿರ್ದೇಶಕರು ಅರ್ಹ ನೇಕಾರರನ್ನು ಗುರುತಿಸತಕ್ಕದ್ದು.
- ನೇಕಾರರು ನೇಕಾರಿಕೆ ಉದ್ದೇಶಕ್ಕಾಗಿ ಒಂದು ಆರ್ಥಿಕ ವರ್ಷದಲ್ಲಿ ನೇಕಾರರ ಸಹಕಾರ ಸಂಘಗಳು / ಪತ್ತಿನ ಸಹಕಾರ ಸಂಘಗಳು / ಕೃಷಿ ಪತ್ತಿನ ಸಹಕಾರ ಸಂಘಗಳು / ಕೃಷಿಯೇತರ ಪತ್ತಿನ ಸಹಕಾರ ಸಂಘಗಳು / ಸಹಕಾರ ಬ್ಯಾಂಕ್ (ಪ್ರಾಥಮಿಕ ಸಹಕಾರ ಕೃಷಿ ಮತ್ತು ಗ್ರಾಮೀಣಾಭಿವೃದ್ಧಿ ಬ್ಯಾಂಕ್‌ಗಳು, ಪಟ್ಟಣ ಸಹಕಾರ ಬ್ಯಾಂಕ್, ಜಿಲ್ಲಾ ಕೇಂದ್ರ ಸಹಕಾರ ಬ್ಯಾಂಕ್‌ಗಳು ಹಾಗೂ ಇತರೆ ಕೈಗಾರಿಕೆ ಸಹಕಾರ ಬ್ಯಾಂಕ್‌ಗಳು), ಹಣಕಾಸಿನ ಸಂಸ್ಥೆಗಳು (Financial Institutions), ವಾಣಿಜ್ಯ ಬ್ಯಾಂಕುಗಳಲ್ಲಿ ಶೇ.8 ರ ಬಡ್ಡಿ ಸಹಾಯಧನ ಸೌಲಭ್ಯ ಪಡೆಯಲು ಅರ್ಹರಿರುತ್ತಾರೆ.
- ನೇಕಾರರ ಸಹಕಾರ ಸಂಘಗಳು / ಕೃಷಿ ಪತ್ತಿನ ಸಹಕಾರ ಸಂಘಗಳು / ಕೃಷಿಯೇತರ ಪತ್ತಿನ ಸಹಕಾರ ಸಂಘಗಳು / ಸಹಕಾರ ಬ್ಯಾಂಕ್‌ಗಳು (ಪ್ರಾಥಮಿಕ ಸಹಕಾರ ಕೃಷಿ ಮತ್ತು ಗ್ರಾಮೀಣ ಅಭಿವೃದ್ಧಿ ಬ್ಯಾಂಕ್‌ಗಳು, ಪಟ್ಟಣ ಸಹಕಾರ ಬ್ಯಾಂಕ್‌ಗಳು, ಜಿಲ್ಲಾ ಕೇಂದ್ರ ಸಹಕಾರ ಬ್ಯಾಂಕ್‌ಗಳು ಹಾಗೂ ಇತರೆ ಕೈಗಾರಿಕಾ ಸಹಕಾರ ಬ್ಯಾಂಕ್‌ಗಳು), ಹಣಕಾಸಿನ ಸಂಸ್ಥೆಗಳು (Financial Institutions), ವಾಣಿಜ್ಯ ಬ್ಯಾಂಕುಗಳು ನೇಕಾರಿಕೆ ಮತ್ತು ನೇಕಾರಿಕೆಗೆ ಸಂಬಂಧಪಟ್ಟ ಚಟುವಟಿಕೆಗಳಾದ ಮಗ್ಗಗಳ ಸ್ಥಾಪನೆ, ಕಚ್ಚಾಮಾಲು ಖರೀದಿ ಮತ್ತು ಸಿದ್ದ ವಸ್ತುಗಳ ಉತ್ಪಾದನೆ, ಮಗ್ಗ ಪೂರ್ವ ಚಟುವಟಿಕೆಗಳು ಮತ್ತು ಮಗ್ಗ ನಂತರದ ಸಂಸ್ಕರಣೆ ಚಟುವಟಿಕೆಗಳು ಇತ್ಯಾದಿ ಉದ್ದೇಶಗಳಿಗೆ ನೀಡುವ ಅಲ್ಪಾವಧಿ, ಮಧ್ಯಮಾವಧಿ ಮತ್ತು ದೀರ್ಘಾವಧಿ (ಕ್ಯಾಶ್ ಕ್ರೆಡಿಟ್ ಸಾಲಗಳನ್ನು ಹೊರತುಪಡಿಸಿ) ಸಾಲಗಳಿಗೆ ಅರ್ಹರಾಗಿರುತ್ತಾರೆ.

**ಹಣಕಾಸಿನ ನೆರವು:-**

ನೇಕಾರರ ಸಹಕಾರ ಸಂಘಗಳು / ಕೃಷಿ ಪತ್ತಿನ ಸಹಕಾರ ಸಂಘಗಳು / ಕೃಷಿಯೇತರ ಪತ್ತಿನ ಸಹಕಾರ ಸಂಘಗಳು / ಸಹಕಾರ ಬ್ಯಾಂಕ್‌ಗಳು (ಪ್ರಾಥಮಿಕ ಸಹಕಾರ ಕೃಷಿ ಮತ್ತು ಗ್ರಾಮೀಣ ಅಭಿವೃದ್ಧಿ ಬ್ಯಾಂಕ್‌ಗಳು, ಪಟ್ಟಣ ಸಹಕಾರ ಬ್ಯಾಂಕ್‌ಗಳು, ಜಿಲ್ಲಾ ಕೇಂದ್ರ ಸಹಕಾರ ಬ್ಯಾಂಕ್‌ಗಳು ಹಾಗೂ ಇತರೆ ಕೈಗಾರಿಕಾ ಸಹಕಾರ ಬ್ಯಾಂಕ್‌ಗಳು), ಹಣಕಾಸಿನ ಸಂಸ್ಥೆಗಳು (Financial Institutions), ವಾಣಿಜ್ಯ ಬ್ಯಾಂಕ್‌ಗಳ ಮೂಲಕ ಪಡೆಯುವ ಸಾಲದ ಮೇಲೆ ಶೇ.8 ರ ಬಡ್ಡಿ ಸಹಾಯಧನವನ್ನು ರಾಜ್ಯ ಸರ್ಕಾರದಿಂದ ನೀಡಲಾಗುವುದು.

**ಅನುಷ್ಠಾನ :-**

ಅ) ಈ ಯೋಜನೆಯಡಿ ಸಾಲ ಪಡೆಯುವ ನೇಕಾರರು ಅರ್ಜಿಗಳನ್ನು ಜಿಲ್ಲೆಯ ಕೈಮಗ್ಗ ಮತ್ತು ಜವಳಿ ಇಲಾಖೆಗೆ ಸಲ್ಲಿಸತಕ್ಕದ್ದು. ಜಿಲ್ಲಾ ಮಟ್ಟದ ಅಧಿಕಾರಿಗಳು ಸ್ಥಳ ಪರಿಶೀಲನೆ ನಡೆಸಿ ಅರ್ಹ ಫಲಾನುಭವಿಗಳ ಸಾಲದ ಪ್ರಸ್ತಾವನೆಗಳನ್ನು ಸಂಬಂಧಿಸಿದ ಬ್ಯಾಂಕ್‌ಗಳಿಗೆ ಸಾಲ ಮಂಜೂರಾತಿಗೆ ಶಿಫಾರಸ್ಸು ಮಾಡತಕ್ಕದ್ದು.

ಆ) ನೇಕಾರರು ನೇಕಾರಿಕೆ ಉದ್ದೇಶಕ್ಕಾಗಿ ನೇಕಾರರ ಸಹಕಾರ ಸಂಘಗಳು / ಪತ್ತಿನ ಸಹಕಾರ ಸಂಘಗಳು / ಕೃಷಿ ಪತ್ತಿನ ಸಹಕಾರ ಸಂಘಗಳು / ಕೃಷಿಯೇತರ ಪತ್ತಿನ ಸಹಕಾರ ಸಂಘಗಳು / ಸಹಕಾರ ಬ್ಯಾಂಕ್ (ಪ್ರಾಥಮಿಕ ಸಹಕಾರ ಕೃಷಿ ಮತ್ತು ಗ್ರಾಮೀಣಾಭಿವೃದ್ಧಿ ಬ್ಯಾಂಕ್‌ಗಳು, ಪಟ್ಟಣ ಸಹಕಾರ ಬ್ಯಾಂಕ್, ಜಿಲ್ಲಾ ಕೇಂದ್ರ ಸಹಕಾರ ಬ್ಯಾಂಕ್‌ಗಳು ಹಾಗೂ ಇತರೆ ಕೈಗಾರಿಕೆ ಸಹಕಾರ ಬ್ಯಾಂಕ್) ಗಳಿಂದ ವಾರ್ಷಿಕವಾಗಿ ಪಡೆದ ಸಾಲಗಳಿಗೆ ಶೇ.8 ರ ಬಡ್ಡಿ ಸಹಾಯಧನ ಪಡೆಯುವ ಬಗ್ಗೆ ಕ್ಲೇಮ್ ಬಿಲ್ಲುಗಳನ್ನು ಬ್ಯಾಂಕ್‌ಗಳು ಜಿಲ್ಲೆಯ ಕೈಮಗ್ಗ ಮತ್ತು ಜವಳಿ ಇಲಾಖೆಯ ಉಪ / ಸಹಾಯಕ ನಿರ್ದೇಶಕರುಗಳ ಕಛೇರಿಗೆ ಕಳುಹಿಸತಕ್ಕದ್ದು. ಜಿಲ್ಲೆಯ ಕೈಮಗ್ಗ ಮತ್ತು ಜವಳಿ ಇಲಾಖೆಯ ಜಂಟಿ / ಉಪ / ಸಹಾಯಕ ನಿರ್ದೇಶಕರುಗಳು ಫಲಾನುಭವಿಗಳು ಪಡೆದ ಸಾಲವು ನೇಕಾರಿಕೆ ಮತ್ತು ನೇಕಾರಿಕೆಗೆ ಸಂಬಂಧಪಟ್ಟ ಚಟುವಟಿಕೆಗಳಾದ ಮಗ್ಗಗಳ ಸ್ಥಾಪನೆ, ಕಚ್ಚಾ ಮಾಲು ಖರೀದಿ ಮತ್ತು ಸಿದ್ಧ ವಸ್ತುಗಳ ಉತ್ಪಾದನೆ, ಮಗ್ಗ ಪೂರ್ವ ಚಟುವಟಿಕೆಗಳು ಮತ್ತು ಮಗ್ಗ ನಂತರದ ಸಂಸ್ಕರಣೆ ಚಟುವಟಿಕೆಗಳು ಇತ್ಯಾದಿ ಉದ್ದೇಶಗಳಿಗೆ ನೀಡುವ ಅಲ್ಪಾವಧಿ, ಮಧ್ಯಮಾವಧಿ ಮತ್ತು ದೀರ್ಘಾವಧಿ ಸಾಲಗಳು ಮಾತ್ರ ಉಪಯೋಗವಾಗಿರುವ ಬಗ್ಗೆ, ಹಾಗೂ ಸಂಬಂಧಿಸಿದ ಜಿಲ್ಲೆಯ ಲೆಕ್ಕಪರಿಶೋಧನಾ ಇಲಾಖೆಯ ಉಪ / ಸಹಾಯಕ ನಿರ್ದೇಶಕರುಗಳು ಬಡ್ಡಿ ಸಹಾಯಧನಕ್ಕೆ ಸಂಬಂಧಿಸಿದಂತೆ ಪ್ರಸ್ತಾವನೆಯನ್ನು ಜಂಟಿಯಾಗಿ ಪರಿಶೀಲಿಸಿ, ಜಂಟಿ ದೃಢೀಕರಣದೊಂದಿಗೆ ಸಾಲ ಪಡೆದ ದಾಖಲೆಗಳ ಪ್ರಸ್ತಾವನೆಯನ್ನು ಜವಳಿ ಅಭಿವೃದ್ಧಿ ಆಯುಕ್ತರಿಗೆ ಶಿಫಾರಸ್ಸು ಮಾಡತಕ್ಕದ್ದು.

ಇ) ಕೃಷಿಯೇತರ / ಕೃಷಿ ಪತ್ತಿನ ಸಹಕಾರ ಸಂಘಗಳು / ನೇಕಾರರ ಸಹಕಾರ ಸಂಘಗಳು / ಜಿಲ್ಲಾ ಕೇಂದ್ರ ಸಹಕಾರ ಬ್ಯಾಂಕ್‌ಗಳಿಗೆ ಸಂಯೋಜಿಸಲ್ಪಟ್ಟಿದ್ದಲ್ಲಿ, ಸದರಿ ಸಹಕಾರ ಸಂಘಗಳ/ಬ್ಯಾಂಕ್‌ಗಳ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಯವರು ಕ್ಲೇಮ್ ಬಿಲ್ಲುಗಳನ್ನು ತಯಾರಿಸಿ ವ್ಯವಸ್ಥಾಪಕ ನಿರ್ದೇಶಕರು, ಜಿಲ್ಲಾ ಕೇಂದ್ರ ಸಹಕಾರ ಬ್ಯಾಂಕ್ ಇವರಿಗೆ ಸಲ್ಲಿಸತಕ್ಕದ್ದು. ನಂತರ ವ್ಯವಸ್ಥಾಪಕ ನಿರ್ದೇಶಕರು ಕ್ಲೇಮ್ ಗಳನ್ನು ಪರಿಶೀಲಿಸಿ ಕ್ರೋಢೀಕರಿಸಿ ಶೇ.8 ರ ಬಡ್ಡಿ ಸಹಾಯಧನ ಪಡೆಯುವ ಬಗ್ಗೆ ಜಿಲ್ಲೆಯ ಕೈಮಗ್ಗ ಮತ್ತು ಜವಳಿ ಇಲಾಖೆಯ ಉಪ/ಸಹಾಯಕ ನಿರ್ದೇಶಕರುಗಳ ಕಛೇರಿಗೆ ಕಳುಹಿಸತಕ್ಕದ್ದು. ಜಿಲ್ಲೆಯ ಕೈಮಗ್ಗ ಮತ್ತು ಜವಳಿ ಇಲಾಖೆಯ ಜಂಟಿ / ಉಪ / ಸಹಾಯಕ ನಿರ್ದೇಶಕರುಗಳು ಫಲಾನುಭವಿಗಳು ಪಡೆದ ಸಾಲವು ನೇಕಾರಿಕೆ ಮತ್ತು

ನೇಕಾರಿಕೆಗೆ ಸಂಬಂಧಪಟ್ಟ ಚಟುವಟಿಕೆಗಳಾದ ಮಗ್ಗಗಳ ಸ್ಥಾಪನೆ, ಕಚ್ಚಾ ಮಾಲು ಖರೀದಿ ಮತ್ತು ಸಿದ್ಧ ವಸ್ತುಗಳ ಉತ್ಪಾದನೆ, ಮಗ್ಗ ಪೂರ್ವ ಚಟುವಟಿಕೆಗಳು ಮತ್ತು ಮಗ್ಗ ನಂತರದ ಸಂಸ್ಕರಣೆ ಚಟುವಟಿಕೆಗಳು ಇತ್ಯಾದಿ ಉದ್ದೇಶಗಳಿಗೆ ನೀಡುವ ಅಲ್ಪಾವಧಿ, ಮಧ್ಯಮಾವಧಿ ಮತ್ತು ದೀರ್ಘಾವಧಿ ಸಾಲಗಳು ಮಾತ್ರ ಉಪಯೋಗವಾಗಿರುವ ಬಗ್ಗೆ ಹಾಗೂ ಸಂಬಂಧಿಸಿದ ಜಿಲ್ಲೆಯ ಲೆಕ್ಕಪರಿಶೋಧನಾ ಇಲಾಖೆಯ ಉಪ/ಸಹಾಯಕ ನಿರ್ದೇಶಕರುಗಳು ಬಡ್ಡಿ ಸಹಾಯಧನಕ್ಕೆ ಸಂಬಂಧಿಸಿದಂತೆ ಪ್ರಸ್ತಾವನೆಯನ್ನು ಜಂಟಿಯಾಗಿ ಪರಿಶೀಲಿಸಿ ಜಂಟಿ ದೃಢೀಕರಣದೊಂದಿಗೆ ಸಾಲ ಪಡೆದ ದಾಖಲೆಗಳ ಪ್ರಸ್ತಾವನೆಯನ್ನು ಜವಳಿ ಅಭಿವೃದ್ಧಿ ಆಯುಕ್ತರಿಗೆ ಶಿಫಾರಸ್ಸು ಮಾಡತಕ್ಕದ್ದು.

ಈ) ಪಿಕಾರ್ಡ್ ಬ್ಯಾಂಕ್‌ಗಳಿಗೆ ಸಂಬಂಧಿಸಿದ ಕ್ಲೇಮ್ ಬಿಲ್ಲುಗಳನ್ನು ಕಸ್ಕಾರ್ಡ್ ಬ್ಯಾಂಕಿನ ಜಿಲ್ಲಾ ವ್ಯವಸ್ಥಾಪಕರು ತಯಾರಿಸಿ ಜಿಲ್ಲೆಯ ಕೈಮಗ್ಗ ಮತ್ತು ಜವಳಿ ಇಲಾಖೆಯ ಉಪ / ಸಹಾಯಕ ನಿರ್ದೇಶಕರುಗಳ ಕಛೇರಿಗೆ ಕಳುಹಿಸತಕ್ಕದ್ದು. ಶೇ.8 ರ ಬಡ್ಡಿ ಸಹಾಯಧನ ಪಡೆಯುವ ಬಗ್ಗೆ ಜಿಲ್ಲೆಯ ಕೈಮಗ್ಗ ಮತ್ತು ಜವಳಿ ಇಲಾಖೆಯ ಜಂಟಿ/ ಉಪ / ಸಹಾಯಕ ನಿರ್ದೇಶಕರುಗಳು ಫಲಾನುಭವಿಗಳು ಪಡೆದ ಸಾಲವು ನೇಕಾರಿಕೆ ಮತ್ತು ನೇಕಾರಿಕೆಗೆ ಸಂಬಂಧಪಟ್ಟ ಚಟುವಟಿಕೆಗಳಾದ ಮಗ್ಗಗಳ ಸ್ಥಾಪನೆ, ಕಚ್ಚಾ ಮಾಲು ಖರೀದಿ ಮತ್ತು ಸಿದ್ಧ ವಸ್ತುಗಳ ಉತ್ಪಾದನೆ, ಮಗ್ಗ ಪೂರ್ವ ಚಟುವಟಿಕೆಗಳು ಮತ್ತು ಮಗ್ಗ ನಂತರದ ಸಂಸ್ಕರಣೆ ಚಟುವಟಿಕೆಗಳು ಇತ್ಯಾದಿ ಉದ್ದೇಶಗಳಿಗೆ ನೀಡುವ ಅಲ್ಪಾವಧಿ, ಮಧ್ಯಮಾವಧಿ ಮತ್ತು ದೀರ್ಘಾವಧಿ ಸಾಲಗಳು ಮಾತ್ರ ಉಪಯೋಗವಾಗಿರುವ ಬಗ್ಗೆ ಹಾಗೂ ಸಂಬಂಧಿಸಿದ ಜಿಲ್ಲೆಯ ಲೆಕ್ಕಪರಿಶೋಧನಾ ಇಲಾಖೆಯ ಉಪ/ಸಹಾಯಕ ನಿರ್ದೇಶಕರುಗಳು ಬಡ್ಡಿ ಸಹಾಯಧನಕ್ಕೆ ಸಂಬಂಧಿಸಿದಂತೆ ಪ್ರಸ್ತಾವನೆಯನ್ನು ಜಂಟಿಯಾಗಿ ಪರಿಶೀಲಿಸಿ ಜಂಟಿ ದೃಢೀಕರಣದೊಂದಿಗೆ ಸಾಲ ಪಡೆದ ದಾಖಲೆಗಳ ಪ್ರಸ್ತಾವನೆಯನ್ನು ಜವಳಿ ಅಭಿವೃದ್ಧಿ ಆಯುಕ್ತರಿಗೆ ಶಿಫಾರಸ್ಸು ಮಾಡತಕ್ಕದ್ದು.

ಉ) ನೇಕಾರರು ನೇಕಾರಿಕೆ ಉದ್ದೇಶಕ್ಕಾಗಿ ಹಣಕಾಸಿನ ಸಂಸ್ಥೆಗಳು (Financial Institutions) ಹಾಗೂ ವಾಣಿಜ್ಯ ಬ್ಯಾಂಕ್‌ಗಳಿಂದ ವಾರ್ಷಿಕವಾಗಿ ಪಡೆದ ಸಾಲಗಳಿಗೆ ಶೇ.8 ರ ಬಡ್ಡಿ ಸಹಾಯಧನ ಪಡೆಯುವ ಬಗ್ಗೆ ಕ್ಲೇಮ್ ಬಿಲ್ಲುಗಳನ್ನು ಸಂಬಂಧಿಸಿದ ಬ್ಯಾಂಕುಗಳು ಜಿಲ್ಲೆಯ ಕೈಮಗ್ಗ ಮತ್ತು ಜವಳಿ ಇಲಾಖೆಯ ಉಪ / ಸಹಾಯಕ ನಿರ್ದೇಶಕರುಗಳ ಕಛೇರಿಗೆ ಕಳುಹಿಸತಕ್ಕದ್ದು. ಜಿಲ್ಲೆಯ ಕೈಮಗ್ಗ ಮತ್ತು ಜವಳಿ ಇಲಾಖೆಯ ಜಂಟಿ/ಉಪ/ಸಹಾಯಕ ನಿರ್ದೇಶಕರುಗಳು ಫಲಾನುಭವಿಗಳು ಪಡೆದ ಸಾಲವು ನೇಕಾರಿಕೆ ಮತ್ತು ನೇಕಾರಿಕೆಗೆ ಸಂಬಂಧಪಟ್ಟ ಚಟುವಟಿಕೆಗಳಾದ ಮಗ್ಗಗಳ ಸ್ಥಾಪನೆ, ಕಚ್ಚಾ ಮಾಲು ಖರೀದಿ ಮತ್ತು ಸಿದ್ಧ ವಸ್ತುಗಳ ಉತ್ಪಾದನೆ, ಮಗ್ಗ ಪೂರ್ವ ಚಟುವಟಿಕೆಗಳು ಮತ್ತು ಮಗ್ಗ ನಂತರದ ಸಂಸ್ಕರಣೆ ಚಟುವಟಿಕೆಗಳು ಇತ್ಯಾದಿ ಉದ್ದೇಶಗಳಿಗೆ ನೀಡುವ ಅಲ್ಪಾವಧಿ, ಮಧ್ಯಮಾವಧಿ ಮತ್ತು ದೀರ್ಘಾವಧಿ ಸಾಲಗಳು ಮಾತ್ರ ಉಪಯೋಗವಾಗಿರುವ ಬಗ್ಗೆ ಹಾಗೂ ಸಂಬಂಧಿಸಿದ Bank Empanelled Auditor ರವರಿಂದ ಅಥವಾ ಲೀಡ್ ಬ್ಯಾಂಕ್ ವ್ಯವಸ್ಥಾಪಕರಿಂದ ಪರಿಶೀಲಿಸಿ ಹಾಗೂ ಕೈಮಗ್ಗ ಮತ್ತು ಜವಳಿ ಇಲಾಖೆಯ ಜಂಟಿ /ಉಪ/ಸಹಾಯಕ ನಿರ್ದೇಶಕರುಗಳೊಂದಿಗೆ ಜಂಟಿಯಾಗಿ ಪರಿಶೀಲಿಸಿ, ಜಂಟಿ ದೃಢೀಕರಣದೊಂದಿಗೆ ಸಾಲ ಪಡೆದ ದಾಖಲೆಗಳ ಪ್ರಸ್ತಾವನೆಯನ್ನು ಜವಳಿ ಅಭಿವೃದ್ಧಿ ಆಯುಕ್ತರಿಗೆ ಶಿಫಾರಸ್ಸು ಮಾಡತಕ್ಕದ್ದು.

ಊ) ಜವಳಿ ಅಭಿವೃದ್ಧಿ ಆಯುಕ್ತರು ಹಾಗೂ ನಿರ್ದೇಶಕರು, ಕೈಮಗ್ಗ ಮತ್ತು ಜವಳಿ ಇಲಾಖೆ, ಬೆಂಗಳೂರು ಇವರು ಕೈಮಗ್ಗ ಮತ್ತು ಜವಳಿ ಇಲಾಖೆಯ ವಿಭಾಗೀಯ / ಜಿಲ್ಲಾ ಮಟ್ಟದ ಅಧಿಕಾರಿಗಳಿಂದ ಬಂದ ಕ್ಲೇಮ್‌ನ ಶಿಫಾರಸ್ಸುಗಳನ್ನು ಕೂಲಂಕಷವಾಗಿ ಪರಿಶೀಲಿಸಿ ಶೇ.8 ರ ಬಡ್ಡಿ ಸಹಾಯಧನವನ್ನು ಸಂಬಂಧಪಟ್ಟ ಸಹಕಾರ ಸಂಘ / ಸಂಸ್ಥೆ / ಹಣಕಾಸಿನ ಸಂಸ್ಥೆ (Financial Institutions)/ ವಾಣಿಜ್ಯ ಬ್ಯಾಂಕುಗಳಿಗೆ ನೇಕಾರರ ಬ್ಯಾಂಕ್ ಸಾಲದ ಖಾತೆಗಳಿಗೆ ನೇರವಾಗಿ ಮರುಪಾವತಿ (ಬಿಡುಗಡೆ) ಮಾಡತಕ್ಕದ್ದು.

**ಷರತ್ತು ಮತ್ತು ನಿಬಂಧನೆಗಳು :-**

- ಈ ಯೋಜನೆಯಡಿ ವಿತರಿಸಲಾದ ನೇಕಾರಿಕೆ ಸಾಲಗಳಿಗೆ ಸಂಬಂಧಿಸಿದಂತೆ ಸರ್ಕಾರದ ಬದ್ಧತೆಯು ಮೇಲಿನ ಮಿತಿಗೆ ಹಾಗೂ ಸಾಲದ ಅವಧಿಗೆ ಸೀಮಿತವಾಗಿರುತ್ತದೆ. ಆದಾಗ್ಯೂ ನೇಕಾರರು ನಿಗದಿತ ದಿನಾಂಕದಂದು ಸಾಲ ಮರುಪಾವತಿಸಲು ವಿಫಲವಾಗಿ ಸುಸ್ತಿದಾರರಾದಲ್ಲಿ, ಸರ್ಕಾರದ ಬದ್ಧತೆ ಇರುವುದಿಲ್ಲ.

- ಸಾಲಗಾರರು ಇಂತಹ ಮುದ್ದತು ಮೀರಿದ ಕಂತುಗಳಲ್ಲಿ ಇರುವ ಸಾಲಗಳನ್ನು ಸಾಮಾನ್ಯ ಬಡ್ಡಿಯ ದರದಲ್ಲಿ ಇತರೆ ವೆಚ್ಚಗಳೊಂದಿಗೆ ಮರುಪಾವತಿಸಬೇಕಾಗುತ್ತದೆ. ಒಂದು ವೇಳೆ ಮುದ್ದತು ಮೀರಿದ ಇಂತಹ ಸಾಲಗಳ ಕಂತುಗಳನ್ನು ಸಾಮಾನ್ಯ ಬಡ್ಡಿ ದರದಲ್ಲಿ ಇತರೆ ವೆಚ್ಚಗಳೊಂದಿಗೆ ಮರುಪಾವತಿಸಿದ ಪಕ್ಷದಲ್ಲಿ ನಂತರದ ಚಾಲ್ತಿ ಕಂತುಗಳಿಗೆ ಶೇ.8 ರ ಬಡ್ಡಿ ಸಹಾಯಧನ ಸೌಲಭ್ಯಗಳು ಮುಂದುವರೆಯುತ್ತದೆ.

- ಈ ಯೋಜನೆಯ ಅವಧಿಯಲ್ಲಿ ಬಡ್ಡಿ ಸಹಾಯಧನವು ಪೂರ್ಣವಾಗಿ ಮರುಪಾವತಿಯಾಗದೇ ಇರುವ ಅಲ್ಪಾವಧಿ, ಮಧ್ಯಮಾವಧಿ ಮತ್ತು ದೀರ್ಘಾವಧಿ (ಕ್ಯಾಶ್ ಕ್ರೆಡಿಟ್ ಸಾಲಗಳನ್ನು ಹೊರತುಪಡಿಸಿ) ಸಾಲಗಳಿಗೆ ಮಾತ್ರ ದೊರೆಯುತ್ತದೆ. ಈ ಸೌಲಭ್ಯವು ಸಾಲ ಮರುಪಾವತಿಯ ಗಡುವಿನ ದಿನಾಂಕದವರೆಗೆ ಅಥವಾ ಪೂರ್ಣವಾಗಿ ಸಾಲ ಮರುಪಾವತಿಯಾದ ದಿನಾಂಕ ಇದರಲ್ಲಿ ಯಾವುದು ಮೊದಲೋ ಆ ಅವಧಿಗೆ ಅನ್ವಯಿಸುತ್ತದೆ. ಸಾಲ ಮರುಪಾವತಿಗೆ ಕಂತುಗಳನ್ನು (ಮಾಸಿಕ, ತ್ರೈಮಾಸಿಕ, ಅರ್ಧ ವಾರ್ಷಿಕ ಮತ್ತು ವಾರ್ಷಿಕ) ನಿಗದಿಪಡಿಸಿದ್ದಲ್ಲಿ ಮಾತ್ರ ಈ ಸೌಲಭ್ಯವು ದೊರೆಯುತ್ತದೆ.

- ಈ ಯೋಜನೆಯಡಿ ಪ್ರತಿ ಕೈಮಗ್ಗ ಹಾಗೂ ಅದರ ಸಲಕರಣೆಗಳ ಖರೀದಿಗೆ ಗರಿಷ್ಟ ರೂ.50,000/- ದುಡಿಮೆ ಬಂಡವಾಳಕ್ಕಾಗಿ ರೂ.30,000/- ಹಾಗೂ ಪ್ರತಿ ವಿದ್ಯುತ್ ಮಗ್ಗ ಖರೀದಿಗೆ ರೂ.1,75,000/-, ದುಡಿಮೆ ಬಂಡವಾಳಕ್ಕಾಗಿ ರೂ.60,000/-ರಂತೆ ಸಹಕಾರ ಬ್ಯಾಂಕ್‌ಗಳು / ಸಹಕಾರ ಸಂಘಗಳು / ಹಣಕಾಸಿನ ಸಂಸ್ಥೆಗಳು (Financial Institutions)/ ವಾಣಿಜ್ಯ ಬ್ಯಾಂಕ್‌ಗಳು ಸಾಲವನ್ನು ಮಂಜೂರು ಮಾಡತಕ್ಕದ್ದು. ಇಲಾಖಾ ಅಧಿಕಾರಿಗಳಿಂದ ಕ್ಲೇಮ್‌ಗಳ ಬಗ್ಗೆ ಸ್ಥಳ ಪರಿಶೀಲಿಸುವ ಸಮಯದಲ್ಲಿ ಖರೀದಿಗೆ ಸಂಬಂಧಿಸಿದ ಅವಶ್ಯವಿರುವ ಬಿಲ್ಲುಗಳನ್ನು ನೇಕಾರರು ಹಾಜರುಪಡಿಸತಕ್ಕದ್ದು. ಸಹಕಾರ ಬ್ಯಾಂಕ್‌ಗಳು, ಹಣಕಾಸಿನ ಸಂಸ್ಥೆಗಳು (Financial Institutions), ವಾಣಿಜ್ಯ ಬ್ಯಾಂಕ್‌ಗಳು ಸಾಲ ವಸೂಲಾತಿಯನ್ನು EMI ಮೂಲಕ ನಿಗದಿಪಡಿಸತಕ್ಕದ್ದು.

- ಈ ಯೋಜನೆಯಡಿಯಲ್ಲಿ ಮಗ್ಗ ಪೂರ್ವ ಹಾಗೂ ಮಗ್ಗ ನಂತರದ ಚಟುವಟಿಕೆಗಳ ಯಂತ್ರೋಪಕರಣಗಳ ಖರೀದಿಗಾಗಿ ಹಾಗೂ ದುಡಿಮೆ ಬಂಡವಾಳಕ್ಕಾಗಿ ಖರೀದಿಸಲಾಗುವ ಬಿಲ್ಲಿನ ದರದನ್ವಯ ರೂ.5.00 ಲಕ್ಷಗಳಿಗೆ ಮಿತಿಗೊಳಿಸಿ, ಸಹಕಾರ ಬ್ಯಾಂಕ್‌ಗಳು/ ಸಹಕಾರ ಸಂಘಗಳು /ಹಣಕಾಸಿನ ಸಂಸ್ಥೆಗಳು (Financial Institutions) /ವಾಣಿಜ್ಯ ಬ್ಯಾಂಕ್‌ಗಳು ಸಾಲವನ್ನು ಮಂಜೂರು ಮಾಡತಕ್ಕದ್ದು. ಇಲಾಖಾ ಅಧಿಕಾರಿಗಳಿಂದ ಕ್ಲೇಮ್‌ಗಳ ಬಗ್ಗೆ ಸ್ಥಳ ಪರಿಶೀಲಿಸುವ ಸಮಯದಲ್ಲಿ ಖರೀದಿಗೆ ಸಂಬಂಧಿಸಿದ ಅವಶ್ಯವಿರುವ ಬಿಲ್ಲುಗಳನ್ನು ನೇಕಾರರು ಹಾಜರುಪಡಿಸತಕ್ಕದ್ದು. ಸಹಕಾರ ಬ್ಯಾಂಕ್‌ಗಳು, ಹಣಕಾಸಿನ ಸಂಸ್ಥೆಗಳು (Financial Institutions), ವಾಣಿಜ್ಯ ಬ್ಯಾಂಕ್‌ಗಳು ಸಾಲ ವಸೂಲಾತಿಯನ್ನು EMI ಮೂಲಕ ನಿಗದಿಪಡಿಸತಕ್ಕದ್ದು.

- ನೇಕಾರರು ದುಡಿಮೆ ಬಂಡವಾಳ, ಮಗ್ಗ ಹಾಗೂ ಮಗ್ಗ ಪೂರ್ವ ಚಟುವಟಿಕೆಗಳ ಖರೀದಿಗಾಗಿ ಪಡೆಯುವ ಸಾಲವು ನೇಕಾರರು ಹೊಂದಿರುವ ಮಗ್ಗಗಳ ಸಂಖ್ಯೆಯನ್ನು ಆಧರಿಸಿರುತ್ತದೆ. ಕೈಮಗ್ಗ ಮತ್ತು ವಿದ್ಯುತ್ ಮಗ್ಗಕ್ಕೆ ನಿಗದಿಪಡಿಸಿರುವ ಪ್ರತಿ ಮಗ್ಗದ ದರ ಹಾಗೂ ದುಡಿಮೆ ಬಂಡವಾಳಕ್ಕೆ ನಿಗದಿಪಡಿಸಿರುವ ಗರಿಷ್ಠ ದರದನ್ವಯ ಮಂಜೂರಾತಿಗೆ ಶೇ.8 ರ ಬಡ್ಡಿ ಸಹಾಯಧನಕ್ಕೆ ಅರ್ಹವಿರುತ್ತದೆ.

- ನೇಕಾರರು ಈ ಯೋಜನೆಯಡಿ ರೂ.2.00 ಲಕ್ಷಗಳವರೆಗೆ ಸಾಲ ಪಡೆದ ಮೊತ್ತಕ್ಕೆ ಕಚ್ಚಾಮಾಲು ಖರೀದಿಸಿದ ಬಿಲ್ಲು ಒದಗಿಸುವ ಬಗ್ಗೆ ವಿನಾಯಿತಿ ನೀಡಲಾಗಿದೆ.

- ಈ ಯೋಜನೆಯ ಅವಧಿಯಲ್ಲಿ ಬಡ್ಡಿ ಸಹಾಯಧನವು ಪೂರ್ಣವಾಗಿ ಮರುಪಾವತಿ ಯಾಗುವ ಅಲ್ಪಾವಧಿ, ಮಧ್ಯಮಾವಧಿ ಮತ್ತು ದೀರ್ಘಾವಧಿ (ಕ್ಯಾಶ್ ಕ್ರೆಡಿಟ್ ಸಾಲಗಳನ್ನು ಹೊರತುಪಡಿಸಿ) ಸಾಲಗಳಿಗೆ ಮಾತ್ರ ದೊರೆಯುತ್ತದೆ. ಈ ಸೌಲಭ್ಯವು ಸಾಲ ಮರುಪಾವತಿಯ ಗಡುವಿನ ದಿನಾಂಕದವರೆಗೆ ಅಥವಾ ಪೂರ್ವವಾಗಿ ಸಾಲ ಮರುಪಾವತಿಯಾದ ದಿನಾಂಕ ಇದರಲ್ಲಿ ಯಾವುದು ಮೊದಲೋ ಆ ಅವಧಿಗೆ ಅನ್ವಯಿಸುತ್ತದೆ.

- ಜವಳಿ ಅಭಿವೃದ್ಧಿ ಆಯುಕ್ತರು ಹಾಗೂ ನಿರ್ದೇಶಕರು, ಕೈಮಗ್ಗ ಮತ್ತು ಜವಳಿ ಇಲಾಖೆ, ಬೆಂಗಳೂರು ಇವರು ಈ ಯೋಜನೆಯನ್ನು ಪರಿಣಾಮಕಾರಿಯಾಗಿ ಜಾರಿಗೊಳಿಸಲು ಅಗತ್ಯವಾದ ಎಲ್ಲಾ ಕ್ರಮಗಳನ್ನು ಕೈಗೊಳ್ಳಲು ಅಗತ್ಯವಾದ ಮಾರ್ಗದರ್ಶನ ಮತ್ತು ಸೂಚನೆಗಳನ್ನು ನೀಡಲು ಸಕ್ಷಮ ಪ್ರಾಧಿಕಾರವಾಗಿರುತ್ತಾರೆ.

- ಈ ಯೋಜನೆಯನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಲು ಕಾಲಕಾಲಕ್ಕೆ ಜವಳಿ ಅಭಿವೃದ್ಧಿ ಆಯುಕ್ತರು ಹಾಗೂ ನಿರ್ದೇಶಕರು, ಕೈಮಗ್ಗ ಮತ್ತು ಜವಳಿ ಇಲಾಖೆ, ಬೆಂಗಳೂರು ಇವರು ನೀಡಿದ ಸೂಚನೆಗಳನ್ನು ನೇಕಾರರ ಸಹಕಾರ ಸಂಘಗಳು / ಕೃಷಿ ಪತ್ತಿನ ಸಹಕಾರ ಸಂಘಗಳು / ಕೃಷಿಯೇತರ ಪತ್ತಿನ ಸಹಕಾರ ಸಂಘಗಳು / ಹಣಕಾಸಿನ ಸಂಸ್ಥೆಗಳು (Financial Institutions) / ವಾಣಿಜ್ಯ ಬ್ಯಾಂಕುಗಳು ಹಾಗೂ ಯೋಜನೆಯಡಿಯಲ್ಲಿನ ಎಲ್ಲಾ ಸಹಕಾರ ಬ್ಯಾಂಕ್‌ಗಳು ಪಾಲಿಸತಕ್ಕದ್ದು.

- ಸರ್ಕಾರದ ಆದೇಶ ಸಂಖ್ಯೆ: ವಾಕೈ 25 ಜಕೈಯೋ 2016, ದಿನಾಂಕ:09.12.2016 & ಸರ್ಕಾರದ ಆದೇಶ ಸಂಖ್ಯೆ: ವಾಕೈ 52 ಜಕೈಯೋ 2017, ದಿನಾಂಕ:02.01.2018 ಗಳನ್ವಯ ನೇಕಾರರು ನೇಕಾರಿಕೆ ಉದ್ದೇಶಕ್ಕೆ ಶೇ.1 ಮತ್ತು ಶೇ.3 ರ ಬಡ್ಡಿ ದರದಲ್ಲಿ ಅಥವಾ ಈ ಆದೇಶದನ್ವಯ ಶೇ.8 ರ ಬಡ್ಡಿ ಸಹಾಯಧನಕ್ಕಾಗಿ ನೇಕಾರರು ಯಾವುದಾದರು ಒಂದು ಸಾಲ ಸೌಲಭ್ಯ ಪಡೆಯಲು ಅರ್ಜಿ ಸಲ್ಲಿಸತಕ್ಕದ್ದು.

- ಸದರಿ ಯೋಜನೆಗೆ ಸಂಬಂಧಿಸಿದಂತೆ ರೂ.5.00 ಕೋಟಿಗಳ ವೆಚ್ಚದ ಕುರಿತಂತೆ ಅಂಕಿ ಅಂಶಗಳ ವಿವರಣೆಯೊಂದಿಗೆ (ಫಲಾನುಭವಿಗಳು ಪಡೆದಿರುವ ಸಾಲ ಇತ್ಯಾದಿ) ಮತ್ತು ಒದಗಿಸಿರುವ ರೂ.2.00 ಕೋಟಿಗಳನ್ನು ವೆಚ್ಚ ಮಾಡಿ, ಹೆಚ್ಚುವರಿ ಅನುದಾನದ ಅವಶ್ಯಕತೆ ಇದ್ದಲ್ಲಿ, ಸೂಕ್ತ ಪ್ರಸ್ತಾವನೆಯನ್ನು ಸರ್ಕಾರಕ್ಕೆ / ಆರ್ಥಿಕ ಇಲಾಖೆಗೆ ಸಲ್ಲಿಸತಕ್ಕದ್ದು.

- ಪ್ರಸ್ತಾವಿತ ಯೋಜನೆಗೆ ತಗಲುವ ವೆಚ್ಚವನ್ನು 2022-23ನೇ ಸಾಲಿನ ನೇಕಾರರ ಪ್ಯಾಕೇಜ್ ಯೋಜನೆಯ ಲೆಕ್ಕಶೀರ್ಷಿಕೆ:2851-00-103-0-62-106 (ಸಹಾಯಧನ) ರಡಿಯಲ್ಲಿ ಒದಗಿಸಲಾದ ಅನುದಾನದಿಂದ ಭರಿಸತಕ್ಕದ್ದು.

- ಸದರಿ ಯೋಜನೆ ಕುರಿತಂತೆ ಜವಳಿ ಅಭಿವೃದ್ಧಿ ಆಯುಕ್ತರು ಹಾಗೂ ನಿರ್ದೇಶಕರು, ಕೈಮಗ್ಗ ಮತ್ತು ಜವಳಿ ಇಲಾಖೆ ರವರು ಮುಂದಿನ ಅಗತ್ಯ ಕ್ರಮಕೈಗೊಳ್ಳತಕ್ಕದ್ದು.

ಈ ಆದೇಶವನ್ನು ಆರ್ಥಿಕ ಇಲಾಖೆಯ ಹಿಂಬರಹ ಸಂಖ್ಯೆ: ಆಇ 173 ವೆಚ್ಚ-1/2022, ದಿನಾಂಕ: 18-04-2022 ಹಾಗೂ ಯೋಜನಾ ಇಲಾಖೆಯ ಹಿಂಬರಹ ಸಂಖ್ಯೆ: PDS/28/PFR/2022, ದಿನಾಂಕ: 13-04-2022 ರಲ್ಲಿ ನೀಡಿರುವ ಸಹಮತಿಯ ಮೇರೆಗೆ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,
21/7/22
(ಬಿ. ವೆಂಕಟೇಶಮೂರ್ತಿ)
ಸರ್ಕಾರದ ಉಪ ಕಾರ್ಯದರ್ಶಿ
ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆ(ಜವಳಿ)
21/7/2022

**ಗೆ,**

1. ಜಂಟಿ ನಿರ್ದೇಶಕರು, ಕರ್ನಾಟಕ ವಿಶೇಷ ರಾಜ್ಯ ಪತ್ರ, ವಿಕಾಸ ಸೌಧ, ಬೆಂಗಳೂರು ಇವರಿಗೆ- ಕರ್ನಾಟಕ ವಿಶೇಷ ರಾಜ್ಯ ಪತ್ರದಲ್ಲಿ ಕೂಡಲೇ ಪ್ರಕಟಿಸಿ 100 ಪ್ರತಿಗಳನ್ನು ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆಗೆ ಒದಗಿಸುವಂತೆ ಕೋರಿದೆ.
2. ಪ್ರಧಾನ ಮಹಾಲೇಖಪಾಲರು (ಜಿ & ಎಸ್.ಎಸ್.ಎ)/ (ಇ & ಆರ್.ಎಸ್.ಎ) (ಎ&ಇ), ಕರ್ನಾಟಕ ರಾಜ್ಯ ಬೆಂಗಳೂರು.
3. ಜವಳಿ ಅಭಿವೃದ್ಧಿ ಆಯುಕ್ತರು ಹಾಗೂ ನಿರ್ದೇಶಕರು, ಕೈಮಗ್ಗ ಮತ್ತು ಜವಳಿ ಇಲಾಖೆ, ಶುಭೋದಯ ಕಾಂಪ್ಲೆಕ್ಸ್, ನಂ.86, ರೈಲ್ವೆ ಸಮಾನಾಂತರ ರಸ್ತೆ, ಕುಮಾರಪಾರ್ಕ್ ಪಶ್ಚಿಮ, ಬೆಂಗಳೂರು-560 020.
4. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಕೈಮಗ್ಗ ಅಭಿವೃದ್ಧಿ ನಿಗಮ ನಿಯಮಿತ, ಪ್ರಿಯದರ್ಶಿನಿ, ನೇಕಾರ ಭವನ, ವಿದ್ಯಾನಗರ, ಹುಬ್ಬಳ್ಳಿ-580 031.
5. ನಿರ್ದೇಶಕರು, ಸಹಕಾರ ಸಂಘಗಳ ಲೆಕ್ಕಪರಿಶೋಧನಾ ಇಲಾಖೆ, ನಂ.17, ಜಯನಿವಾಸ, ಶಂಕರಮಠ ರಸ್ತೆ, ಬಸವನಗುಡಿ, ಬೆಂಗಳೂರು-560 004.
6. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ರಾಜ್ಯ ಜವಳಿ ಮೂಲ ಸೌಲಭ್ಯ ಅಭಿವೃದ್ಧಿ ನಿಗಮ ನಿಯಮಿತ, ಟ್ರೇಡ್ ಸೆಂಟರ್, ನಂ.29/4, ಮೊದಲನೇ ಮಹಡಿ, ರೇಸ್ ಕೋರ್ಸ್ ರಸ್ತೆ, ಬೆಂಗಳೂರು-560 001.
7. ವ್ಯವಸ್ಥಾಪಕ ನಿರ್ದೇಶಕರು, ಕಾವೇರಿ ಹ್ಯಾಂಡ್ ಲೂಮ್ಸ್, ನಂ.49, ನೇಕಾರರ ಭವನ, ಮಾಡಲ್ ಹೌಸ್ ಸ್ಟ್ರೀಟ್, ಬಸವನಗುಡಿ, ಬೆಂಗಳೂರು-560 004.
8. ಸಹಕಾರ ಸಂಘಗಳ ನಿಬಂಧಕರು, ನಂ.1, ಆಲಿ ಆಸ್ಕರ್ ರಸ್ತೆ, ಬೆಂಗಳೂರು- 560 051.
9. ನಿರ್ದೇಶಕರು/ ಜಂಟಿ ನಿರ್ದೇಶಕರು, ರಾಜ್ಯ ಹುಜೂರು ಖಜಾನೆ, ಕೆ.ಆರ್.ವೃತ್ತ, ಅಂಬೇಡ್ಕರ್ ರಸ್ತೆ, ಬೆಂಗಳೂರು.
10. ಎಲ್ಲಾ ವಲಯ/ವಿಭಾಗಗಳ ಜಂಟಿ ನಿರ್ದೇಶಕರುಗಳಿಗೆ.
11. ಎಲ್ಲಾ ಜಿಲ್ಲೆಯ ಸಹಾಯಕ/ಉಪ ನಿರ್ದೇಶಕರುಗಳಿಗೆ(ಜವಳಿ ಅಭಿವೃದ್ಧಿ ಆಯುಕ್ತರ ಮುಖಾಂತರ).

**ಪ್ರತಿ ಮಾಹಿತಿಗಾಗಿ:**

1. ಮಾನ್ಯ ಮುಖ್ಯಮಂತ್ರಿಯವರ ಪ್ರಧಾನ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.
2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಆರ್ಥಿಕ ಇಲಾಖೆ, ವಿಧಾನ ಸೌಧ, ಬೆಂಗಳೂರು.
3. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಯೋಜನೆ, ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.

..8

4. ಮಾನ್ಯ ಕೈಮಗ್ಗ ಮತ್ತು ಜವಳಿ ಸಚಿವರ ಆಪ್ತ ಕಾರ್ಯದರ್ಶಿ, ವಿಕಾಸ ಸೌಧ, ಬೆಂಗಳೂರು.
5. ಸರ್ಕಾರದ ಕಾರ್ಯದರ್ಶಿ (ಎಂ.ಎಸ್.ಎಂ.ಇ. & ಗಣಿ), ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆ-ರವರ ಆಪ್ತ ಕಾರ್ಯದರ್ಶಿ, ವಿಕಾಸ ಸೌಧ, ಬೆಂಗಳೂರು.
6. ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ(ವೆಚ್ಚ-1), ಇವರ ಆಪ್ತ ಸಹಾಯಕರು, ವಿಧಾನ ಸೌಧ, ಬೆಂಗಳೂರು.
7. ಶಾಖಾ ರಕ್ಷಾ ಕಡತ/ ಹೆಚ್ಚುವರಿ ಪ್ರತಿಗಳು.